**National**
**Kannada**
**11.11.2025 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ದೆಹಲಿ ಕಾರು ಸ್ಫೋಟ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಿದ ಕೇಂದ್ರ ಸರ್ಕಾರ
2. ದೆಹಲಿ ಸ್ಫೋಟದ ಹಿಂದಿನ ಸಂಚುಕೋರರನ್ನು ಸುಮ್ಮನೆ ಬಿಡುವುದಿಲ್ಲ – ಪ್ರಧಾನಿ ನರೇಂದ್ರ ಮೋದಿ
3. ಬಿಹಾರ ವಿಧಾನಸಭಾ ಚುನಾವಣೆ: ಎರಡನೇ ಹಂತದ ಮತದಾನ ಬಹುತೇಕ ಶಾಂತಿಯುತ
4. ನವದೆಹಲಿಯಲ್ಲಿಂದು ಮೊದಲ ಮಹಿಳಾ ಟಿ-20 ಅಂಧರ ವಿಶ್ವಕಪ್ ಕ್ರಿಕೆಟ್‌ಗೆ ಚಾಲನೆ

***************

ದೆಹಲಿಯ ಕೆಂಪುಕೋಟೆಯ ಬಳಿ ನಿನ್ನೆ ಸಂಜೆ ನಡೆದ ಕಾರು ಸ್ಫೋಟ ಪ್ರಕರಣದ ತನಿಖೆಯನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ತನಿಖಾ ದಳ – ಎನ್‌ಐಎಗೆ ವಹಿಸಿದೆ.

ಸ್ಫೋಟದ ನಂತರ ಪರಿಸ್ಥಿತಿಯನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನವದೆಹಲಿಯ ತಮ್ಮ ನಿವಾಸದಲ್ಲಿಂದು ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಸಭೆಯಲ್ಲಿ ಗೃಹ ಕಾರ್ಯದರ್ಶಿ, ಗುಪ್ತಚರ ದಳದ ನಿರ್ದೇಶಕರು, ದೆಹಲಿ ಪೊಲೀಸ್ ಆಯುಕ್ತರು ಮತ್ತು ರಾಷ್ಟ್ರೀಯ ತನಿಖಾ ದಳದ ಮಹಾನಿರ್ದೇಶಕರು ಭಾಗವಹಿಸಿದ್ದರು. ಜಮ್ಮು ಮತ್ತು ಕಾಶ್ಮೀರದ ಪೊಲೀಸ್ ಮಹಾನಿರ್ದೇಶಕರು ವರ್ಚುಯಲ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

ದೆಹಲಿಯಲ್ಲಿ ಎಲ್ಲ ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ದೆಹಲಿ ಪೊಲೀಸರು, ಕಾನೂನು ಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆ, ಸ್ಫೋಟಕ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆಯ ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಭದ್ರತಾ ಕಾರಣಗಳಿಂದಾಗಿ ಕೆಂಪುಕೋಟೆ ಮೆಟ್ರೊ ನಿಲ್ದಾಣವನ್ನು ಮುಚ್ಚಲಾಗುವುದು ಎಂದು ದೆಹಲಿ ಮೆಟ್ರೊ ರೈಲು ನಿಗಮ ತಿಳಿಸಿದೆ. ಅಲ್ಲದೇ ಗುರುವಾರದವರೆಗೆ ಕೆಂಪುಕೋಟೆ ಸಂದರ್ಶಕರಿಗೆ ಮುಚ್ಚಿರುತ್ತದೆ.

ದೆಹಲಿಯ ಕೆಂಪುಕೋಟೆ ಬಳಿ ನಿನ್ನೆ ಕಾರೊಂದರಲ್ಲಿ ಸಂಭವಿಸಿದ ಸ್ಫೋಟದಲ್ಲಿ 8 ಜನರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.

***************

ದೆಹಲಿಯಲ್ಲಿ ನಡೆದ ಭೀಕರ ಸ್ಫೋಟದ ಸಂಚುಕೋರರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ತಪ್ಪಿತಸ್ಥರನ್ನು ಕಾನೂನು ಕ್ರಮಕ್ಕೆ ಒಳಪಡಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಭೂತಾನ್‌ನ ಥಿಂಪುವಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಪ್ರಧಾನಿ ಮೋದಿ, ನಿನ್ನೆ ರಾತ್ರಿ ಇಡೀ ತನಿಖಾ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿದ್ದೆ. ಘಟನೆ ಕುರಿತು ತನಿಖಾ ಸಂಸ್ಥೆಗಳು ತನಿಖೆಯನ್ನು ತೀವ್ರಗೊಳಿಸಿವೆ ಎಂದು ತಿಳಿಸಿದರು.

ನಿನ್ನೆ ಸಂಜೆ ನವದೆಹಲಿಯಲ್ಲಿ ನಡೆದ ಘಟನೆ ಎಲ್ಲರ ಹೃದಯವನ್ನು ತೀವ್ರವಾಗಿ ಕಲಕಿದೆ. ಸಂತ್ರಸ್ತರ ಕುಟುಂಬಗಳೊಂದಿಗೆ ಇಡೀ ರಾಷ್ಟ್ರ ನಿಂತಿದೆ ಎಂದು ಅವರು ಹೇಳಿದರು.

ಶತಮಾನಗಳಿಂದ ಭಾರತ ಮತ್ತು ಭೂತನ್ ನಡುವಿನ ಸಂಬಂಧ ಸೌಹಾರ್ದಯುತ ಮತ್ತು ಸಾಂಸ್ಕೃತಿಕವಾಗಿದೆ. ಈ ಮಹತ್ವದ ಸಂದರ್ಭದಲ್ಲಿ ಭಾಗವಹಿಸುವುದು ಭಾರತದ ಬದ್ಧತೆಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಇನ್ನೊಂದೆಡೆ, ಭಾರತ ಮತ್ತು ಭೂತಾನ್ ನಡುವಿನ ಯಶಸ್ವಿ ಇಂಧನ ಪಾಲುದಾರಿಕೆಯಲ್ಲಿ ಮತ್ತೊಂದು ಪ್ರಮುಖ ಮೈಲುಗಲ್ಲಾಗಿ ಪುನತ್ಸಂಗ್ಚು–2 ಜಲವಿದ್ಯುತ್ ಯೋಜನೆಗೆ ಎರಡೂ ಕಡೆಯವರು ಸಹಿ ಹಾಕಿದರು.

ಭೂತಾನ್‌ನ ಥಿಂಪುವಿನ ವಾಂಗ್ ಚು ನದಿಯ ಪಶ್ಚಿಮ ದಂಡೆಯಲ್ಲಿರುವ ಐತಿಹಾಸಿಕ ಕೋಟೆ ಮತ್ತು ಬೌದ್ಧ ಮಠವಾದ ತಾಶಿಚೋ ಡ್ಜಾಂಗ್‌ನಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೂತಾನ್ ರಾಜ ಮತ್ತು ರಾಣಿ ಬರಮಾಡಿಕೊಂಡರು. ಈ ವೇಳೆ ಪ್ರಧಾನಿ ಮೋದಿ ದೀಪ ಹಚ್ಚುವ ಮೂಲಕ ಪ್ರಾರ್ಥನೆ ಸಲ್ಲಿಸಿದರು.

***************

ದೆಹಲಿ ಬಾಂಬ್ ಸ್ಫೋಟ ಪ್ರಕರಣಕ್ಕೆ ಕಾರಣರಾದವರನ್ನು ಪತ್ತೆ ಮಾಡಿ, ಸಂತ್ರಸ್ತರಿಗೆ ನ್ಯಾಯ ದೊರಕಿಸಿಕೊಡುವುದಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭರವಸೆ ನೀಡಿದ್ದಾರೆ.

ದೆಹಲಿಯಲ್ಲಿಂದು ರಕ್ಷಣಾ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದುರ್ಘನೆಯ ಬಗ್ಗೆ ಆಳವಾದ ತನಿಖೆ ನಡೆಯುತ್ತಿದೆ. ತನಿಖೆಯ ಪ್ರಗತಿಯ ಬಗ್ಗೆ ಸಾರ್ವಜನಿಕರಿಗೆ ಶೀಘ್ರದಲ್ಲೇ ಮಾಹಿತಿ ನೀಡುತ್ತೇವೆ. ಈ ಭೀಕರ ಘಟನೆ ಖಂಡನೀಯ ಎಂದು ಹೇಳಿದರು.

***************

ಬಿಹಾರದಲ್ಲಿ ಇಂದು ಎರಡನೇ ಮತ್ತು ಅಂತಿಮ ಹಂತದ ವಿಧಾನಸಭೆ ಚುನಾವಣೆಯ ಮತದಾನ ಬಹುತೇಕ ಶಾಂತಿಯುತವಾಗಿ ನಡೆಯಿತು. ಸಂಜೆ 5 ಗಂಟೆಯ ವೇಳೆಗೆ ಶೇಕಡ 67.14 ರಷ್ಟು ಮತದಾನವಾಗಿತ್ತು ಎಂದು ಚುನಾವಣಾ ಆಯೋಗ ತಿಳಿಸಿದೆ.

ಈ ಹಂತದಲ್ಲಿ 20 ಜಿಲ್ಲೆಗಳ 122 ಕ್ಷೇತ್ರಗಳಿಗೆ ಮತದಾನ ನಡೆಯಿತು. ಭದ್ರತಾ ಕಾರಣಗಳಿಂದಾಗಿ 7 ಕ್ಷೇತ್ರಗಳಲ್ಲಿ ಸಂಜೆ 5 ಗಂಟೆಗೆ ಮತದಾನ ಮುಕ್ತಾಯಗೊಂಡಿತು. ಉಳಿದ ಕ್ಷೇತ್ರಗಳಲ್ಲಿ ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮತದಾನ ನಡೆಯಿತು. ಈ ತಿಂಗಳ 14 ರಂದು ಮತ ಎಣಿಕೆ ನಡೆಯಲಿದೆ.

ಇದೇ ವೇಳೆ ಏಳು ರಾಜ್ಯಗಳ 8 ವಿಧಾನಸಭಾ ಕ್ಷೇತ್ರಗಳಿಗೆ ಇಂದು ಉಪಚುನಾವಣೆ ನಡೆಯಿತು.

ಜಮ್ಮು ಮತ್ತು ಕಾಶ್ಮೀರದ ಬಡ್ಗಾಂ ಹಾಗೂ ನಗ್ರೋಟಾ, ರಾಜಸ್ಥಾನದ ಅಂತಾ, ಜಾರ್ಖಂಡ್‌ನ ಘಟ್ಸಿಲಾ, ತೆಲಂಗಾಣದ ಜುಬಿಲಿ ಹಿಲ್ಸ್, ಪಂಜಾಬ್‌ನ ತರ್ನ್ ತರನ್, ಮಿಜೋರಾಂನ ದಂಪಾ ಮತ್ತು ಒಡಿಶಾದ ನುವಾಪಾಡಾ ಕ್ಷೇತ್ರಗಳಿಗೆ ಮತದಾನ ನಡೆಯಿತು.

ಬಿಹಾರ ವಿಧಾನಸಭಾ ಚುನಾವಣೆಯ ಜೊತೆಗೆ ನವೆಂಬರ್ 14 ರಂದು ಮತ ಎಣಿಕೆ ನಡೆಯಲಿದೆ.

***************

ಕೇರಳದಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಡಿಸೆಂಬರ್ 9 ಮತ್ತು 11 ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ ಎಂದು ಕೇರಳ ಚುನಾವಣಾ ಆಯುಕ್ತ ಎ.ಶಾಜಹಾನ್ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ನೀತಿ ಸಂಹಿತೆ ಜಾರಿಗೆ ಬಂದಿದ್ದು, ನಾಮಪತ್ರ ಸಲ್ಲಿಸಲು ನವೆಂಬರ್ 21 ಕೊನೆಯ ದಿನವಾಗಿದೆ. ನವೆಂಬರ್ 22 ರಂದು ನಾಮಪತ್ರ ಪರಿಶೀಲನೆ ಕಾರ್ಯ ನಡೆಯಲಿದೆ. ನವೆಂಬರ್ 24 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ಒಂದು ಸಾವಿರದ 199 ಸ್ಥಳೀಯ ಸಂಸ್ಥೆಗಳಲ್ಲಿ ಒಟ್ಟು 23 ಸಾವಿರದ 576 ವಾರ್ಡ್‌ಗಳಿಗೆ ಚುನಾವಣೆ ನಡೆಯಲಿದೆ. ಡಿಸೆಂಬರ್ 13 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಹನೋಯ್‌ನಲ್ಲಿಂದು ನಡೆದ ಭಾರತ-ವಿಯೇಟ್ನಾಂ ಸಮರಾಭ್ಯಾಸ ವಿನ್‌ಬ್ಯಾಕ್ಸ್ 6ನೇ ಆವೃತ್ತಿಯ ಉದ್ಘಾಟನಾ ಸಮಾರಂಭದಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಮತ್ತು ವಿಯೇಟ್ನಾಂ ಸೇನೆಯ ಉಪ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಫುಂಗ್‌ಸಿ ಟಾನ್ ಅಧ್ಯಕ್ಷತೆ ವಹಿಸಿದ್ದರು.

ವಿನ್‌ಬ್ಯಾಕ್ಸ್- ಭಾರತ ಮತ್ತು ವಿಯೇಟ್ನಾಂ ನಡುವಿನ ದ್ವಿಪಕ್ಷೀಯ ಮಿಲಿಟರಿ ಸಮರಾಭ್ಯಾಸವಾಗಿದ್ದು, ಇದು ಪರಸ್ಪರ ಕಾರ್ಯಾಚರಣೆ ಮತ್ತು ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಅತ್ಯುತ್ತಮ ಮಾಹಿತಿ ಮತ್ತು ಅಭ್ಯಾಸಗಳನ್ನು ಹಂಚಿಕೊಳ್ಳುವ ಗುರಿ ಹೊಂದಿದೆ.

ಇದು ಉಭಯ ದೇಶಗಳ ನಡುವೆ ಪರಸ್ಪರ ರಕ್ಷಣಾ ಸಹಕಾರ ಬಲಪಡಿಸುವ ಗುರಿ ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

***************

ಭಾರತದ ರಾಷ್ಟ್ರೀಯ ಪಾವತಿ ನಿಗಮದ ಅಂತಾರಾಷ್ಟ್ರೀಯ ಅಂಗವಾದ ಎನ್‌ಪಿಸಿಐ ಇಂಟರ್‌ನ್ಯಾಷನಲ್ ಪೇಮೆಂಟ್ ಲಿಮಿಟೆಡ್ ಮತ್ತು ಬಹರೇನ್‌ನ ಪ್ರಮುಖ ಫಿನ್‌ಟೆಕ್ ಹಾಗೂ ಎಲೆಕ್ಟ್ರಾನಿಕ್ ಹಣಕಾಸು ವಹಿವಾಟು ಕಂಪನಿಯಾದ 'ಬೆನಿಫಿಟ್', ಭಾರತ ಮತ್ತು ಬಹರೇನ್ ನಡುವೆ ನೈಜ ಸಮಯದ ಗಡಿಯಾಚೆಗಿನ ಪಾವತಿಗಳನ್ನು ಸಕ್ರಿಯಗೊಳಿಸಲು ಪಾಲುದಾರಿಕೆ ಮಾಡಿಕೊಂಡಿದೆ.

ಈ ಹೊಸ ಪಾಲುದಾರಿಕೆ ಭಾರತದ ಏಕೀಕೃತ ಪಾವತಿ ವ್ಯವಸ್ಥೆ-ಯುಪಿಐ ಅನ್ನು ಬಹರೇನ್‌ನ ಇಎಫ್‌ಟಿಎಸ್‌ನೊಂದಿಗೆ ಸಂಪರ್ಕಿಸುತ್ತದೆ. ಇದು ಎರಡು ದೇಶಗಳ ಬಳಕೆದಾರರು ಶೀಘ್ರ ಮತ್ತು ಸುರಕ್ಷಿತವಾಗಿ ಹಣ ಪಾವತಿಸಲು ಮತ್ತು ಸ್ವೀಕರಿಸಲು ಅನುವು ಮಾಡಿಕೊಡುತ್ತದೆ.

***************

ಬುಡಕಟ್ಟು ಸಂಪ್ರದಾಯಗಳು ಎಲ್ಲಿಂದ ಬಂದರೂ ಅವುಗಳನ್ನು ರಕ್ಷಿಸುವುದು ಮತ್ತು ಸಂರಕ್ಷಿಸುವುದು ಜನರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಪ್ರತಿಪಾದಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ರಾಷ್ಟ್ರೀಯ ಬುಡಕಟ್ಟು ಸಾಹಿತ್ಯ ಉತ್ಸವ-2025 ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತದ ಬುಡಕಟ್ಟುಗಳು ಶ್ರೀಮಂತ ಮತ್ತು ವೈವಿಧ್ಯಮಯ ಇತಿಹಾಸವನ್ನು ಹೊಂದಿವೆ ಎಂದು ಹೇಳಿದರು.

ಇಂದು ಜನರು ಹೆಚ್ಚು ನೈಸರ್ಗಿಕ, ಆರೋಗ್ಯಕರ ಮತ್ತು ಸಮತೋಲಿತ ಜೀವನವನ್ನು ನಡೆಸಲು ನಗರಗಳಿಂದ ಹಳ್ಳಿಗಳಿಗೆ ಹಿಂತಿರುಗುತ್ತಿದ್ದಾರೆ ಎಂದು ಸಾವಿತ್ರಿ ಠಾಕೂರ್ ಅಭಿಪ್ರಾಯಪಟ್ಟರು.

***************

ಪಾಕಿಸ್ತಾನದ ಇಸ್ಲಾಮಾಬಾದ್‌ನ ನ್ಯಾಯಾಲಯದ ಕಟ್ಟಡದ ಹೊರಗೆ ಇಂದು ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಕನಿಷ್ಠ 12 ಜನರು ಸಾವನ್ನಪ್ಪಿದ್ದು, ಕನಿಷ್ಠ 21 ಮಂದಿ ಗಾಯಗೊಂಡಿದ್ದಾರೆ.

ಸ್ಥಳೀಯ ಪೊಲೀಸರ ಪ್ರಕಾರ, ನ್ಯಾಯಾಲಯದ ಹೊರಗೆ ನಿಲ್ಲಿಸಿದ್ದ ಕಾರಿನಲ್ಲಿ ಸ್ಫೋಟ ಸಂಭವಿಸಿದೆ.

ಕಳೆದ ಕೆಲವು ವರ್ಷಗಳಿಂದ ಪಾಕಿಸ್ತಾನ, ವಿಶೇಷವಾಗಿ ಖೈಬರ್ ಪಖ್‌ತುನ್ವಾ ಮತ್ತು ಬಲುಚಿಸ್ತಾನ ಪ್ರಾಂತ್ರದಲ್ಲಿ ಭದ್ರತಾ ಸಮಸ್ಯೆಗಳನ್ನು ಎದುರಿಸುತ್ತಿದೆ. ಈ ನಡುವೆ ಪಾಕಿಸ್ತಾನದ ಮಾನವ ಹಕ್ಕುಗಳ ಆಯೋಗ, ಖೈಬರ್ ಪಖ್‌ತುನ್ವಾದಲ್ಲಿ ಹದಗೆಡುತ್ತಿರುವ ಭದ್ರತೆ ಮತ್ತು ಮಾನವ ಹಕ್ಕುಗಳ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದೆ.

***************

ಮೊದಲ ಮಹಿಳಾ ಟಿ–20 ಅಂಧರ ವಿಶ್ವಕಪ್ ಕ್ರಿಕೆಟ್ ನವದೆಹಲಿಯಲ್ಲಿ ಇಂದು ಆರಂಭವಾಯಿತು. ಭಾರತ, ಶ್ರೀಲಂಕಾ, ಅಮೆರಿಕಾ, ನೇಪಾಳ, ಆಸ್ಟ್ರೇಲಿಯಾ ಮತ್ತು ಪಾಕಿಸ್ತಾನ– 6 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿವೆ.

ಉದ್ಘಾಟನಾ ಪಂದ್ಯ ಭಾರತ ಮತ್ತು ಶ್ರೀಲಂಕಾ ನಡುವೆ ನಡೆಯಲಿದೆ. ಭಾರತ ಮತ್ತು ಶ್ರೀಲಂಕಾ ಆಯೋಜಿಸುತ್ತಿರುವ ಈ ಪಂದ್ಯಾವಳಿಯು, ಈ ತಿಂಗಳ 23 ರವರೆಗೆ ನಡೆಯಲಿದ್ದು, ಫೈನಲ್ ಪಂದ್ಯ ಶ್ರೀಲಂಕಾದ ಕೊಲಂಬೊದಲ್ಲಿ ನಡೆಯಲಿದೆ.

ಉದ್ಘಾಟನಾ ಸಮಾರಂಭದಲ್ಲಿ ಮಾಜಿ ಸಚಿವರಾದ ಅನುರಾಗ್ ಠಾಕೂರ್ ಮತ್ತು ಮೀನಾಕ್ಷಿ ಲೇಖಿ ಉಪಸ್ಥಿತರಿದ್ದರು.

***************

ಪುಣೆಯಲ್ಲಿ ನಡೆದ ಎಲೈಟ್ ಬಿ ಗುಂಪಿನ ರಣಜಿ ಪಂದ್ಯಾವಳಿಯಲ್ಲಿ ಮಹಾರಾಷ್ಟ್ರ ಹಾಗೂ ಕರ್ನಾಟಕ ನಡುವಿನ ಪಂದ್ಯ ಡ್ರಾ ಆಗಿದೆ.

ಮೊದಲ ಇನ್ನಿಂಗ್ಸ್‌ನಲ್ಲಿ 13 ರನ್‌ಗಳ ಮುನ್ನಡೆ ಸಾಧಿಸಿದ್ದ ಮಯಾಂಕ್ ಅಗರ್ವಾಲ್ ನೇತೃತ್ವದ ತಂಡ, 3 ಅಂಕ ಗಳಿಸಿದೆ. ಬೌಲಿಂಗ್ ಹಾಗೂ ಬ್ಯಾಟಿಂಗ್ ಎರಡರಲ್ಲೂ ಮಿಂಚಿದ ಅಲ್‌ರೌಂಡರ್ ಶ್ರೇಯಸ್ ಗೋಪಾಲ್, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ 313 ಹಾಗೂ 310 ರನ್ ಗಳಿಸಿದೆ. ಮಹಾರಾಷ್ಟ್ರ ಮೊದಲ ಇನ್ನಿಂಗ್ಸ್‌ನಲ್ಲಿ 300 ರನ್ ಗಳಿಸಿದೆ.

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ರಣಜಿ ಟ್ರೋಫಿಯ ಡಿ ಗುಂಪಿನ ಪಂದ್ಯದಲ್ಲಿ ದೆಹಲಿ ವಿರುದ್ಧ ಜಮ್ಮು–ಕಾಶ್ಮೀರ ಗೆಲುವು ಸಾಧಿಸಿದೆ. 65 ವರ್ಷಗಳ ರಣಜಿ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ದೆಹಲಿಯನ್ನು ಸೋಲಿಸಿದ ಜಮ್ಮು–ಕಾಶ್ಮೀರ, ದಾಖಲೆ ಬರೆದಿದೆ.

***************

ಮುಂಬೈ ಷೇರುಮಾರುಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ–ಸೆನ್ಸೆಕ್ಸ್ 336 ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ 83 ಸಾವಿರದ 871 ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ–ನಿಫ್ಟಿ 121 ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ 25 ಸಾವಿರದ 695 ಅಂಕಗಳು ದಾಖಲಾಗಿದೆ.

*******ಮುಕ್ತಾಯ*******